## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ದೇವನಹಳ್ಳಿ ತಾಲ್ಲೂಕು ವಿಶ್ವನಾಥಪುರ ಗ್ರಾಮ ಪಂಚಾಯತ್, ವಸತಿ ಬಡಾವಣೆಯ ಸಿ.ಎ. ನಿವೇಶನವನ್ನು ಅಕ್ರಮವಾಗಿ ಪರಭಾರೆ ಮಾಡಿರುವ ಹಿನ್ನೆಲೆಯಲ್ಲಿ ಶ್ರೀ ಎನ್.ಆರ್.ಉಮೇಶ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ದೇವನಹಳ್ಳಿ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ.

ಓದಲಾಗಿದೆ: ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 82 ಗ್ರಾಪಂಅ 2017 ದಿನಾಂಕ: 27-02-2017.

*******

ಪ್ರಸ್ತಾವನೆ:-

ಮೇಲೆ ಓದಲಾದ ಅನಧಿಕೃತ ಟಿಪ್ಪಣಿಯಲ್ಲಿ ವಸತಿ ಬಡಾವಣೆಗಳಲ್ಲಿನ ಸಿ.ಎ. ನಿವೇಶನಗಳನ್ನು ಕಾನೂನು ಬಾಹಿರವಾಗಿ ಭೋಗ್ಯ/ ಕ್ರಯ ಪತ್ರವನ್ನು ನೊಂದಾಯಿಸಿ ಕೊಟ್ಟಿರುವ ಬಗ್ಗೆ ಗ್ರಾಮ ಪಂಚಾಯತಿ ಆಸ್ತಿಗಳ ಅಕ್ರಮ ಪರಭಾರೆ ಪ್ರಕರಣದಲ್ಲಿ ಕಾನೂನುಬಾಹಿರವಾಗಿ ತಾಲ್ಲೂಕು ಪಂಚಾಯತಿ ಅನುಮೋದನೆ ಪಡೆಯದೆ ಕರ್ತವ್ಯಲೋಪ ಎಸಗಿರುವ ಅಂದಿನ ದೇವನಹಳ್ಳಿ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಉಮೇಶ ಇವರನ್ನು ಈ ಕೆಳಕಂಡ ಕರ್ತವ್ಯಲೋಪ ಹಾಗೂ ದುರ್ನಡತೆ ಎಸಗಿರುವುದರಿಂದ ಕೂಡಲೇ ಸೇವೆಯಿಂದ ಅಮಾನತ್ತುಗೊಳಿಸುವಂತೆ ಪ್ರಸ್ತಾಪಿಸಲಾಗಿದೆ.

4. ದೇವನಹಳ್ಳಿ ತಾಲ್ಲೂಕು, ವಿಶ್ವನಾಥಪುರ ಗ್ರಾಮ ಪಂಚಾಯತಿಯಲ್ಲಿ ದಿನಾಂಕ: 08-01-2016 ಹಾಗೂ 11-03-2016 ರಂದು ನಡೆದ ಗ್ರಾಮ ಪಂಚಾಯತಿ ಸಭೆಯಲ್ಲಿ **FORTIUS LAND DEVELOPERS L.L.P** ಸಂಸ್ಥೆಯವರು ದಿನಾಂಕ: 02-01-2016ರ ಮನವಿಯಲ್ಲಿ ಸಿ.ಎ. ಸೈಟ್‌ಗಳ 4414 ಚ.ಮೀ. ಪ್ರದೇಶವನ್ನು ಕ್ಲಬ್ ಹೌಸ್ ನಿರ್ಮಾಣಕ್ಕಾಗಿ **Lease back** ನೀಡಬೇಕೆಂದು ಕೋರಿರುವ ವಿಷಯವನ್ನು ಚರ್ಚಿಸಿದ್ದು, ಬೊಮ್ಮನವಾರ ಗ್ರಾಮದ ಸ.ನಂ. 64 ಹಾಗೂ ಬಂಡರಾಮನಹಳ್ಳಿ ಗ್ರಾಮದ ಸ.ನಂ. 12 ರಲ್ಲಿನ ಸಿ.ಎ.1 ಹಾಗೂ ಸಿ.ಎ.2ರ ನಿವೇಶನಗಳನ್ನು ಗುತ್ತಿಗೆ ಆಧಾರದ ಮೇಲೆ ನೀಡುವ ಬಗ್ಗೆ ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪತ್ರ ಬರೆದು ಅನುಮತಿ ಪಡೆದು ನಂತರ ಮುಂದಿನ ಕ್ರಮವಹಿಸುವಂತೆ ಸಭೆಯಲ್ಲಿ ನಿರ್ಣಯಿಸಲಾಗಿರುತ್ತದೆ.

5. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993ರ ಪ್ರಕರಣ 209ರ ಅಡಿಯಲ್ಲಿ ರಚಿಸಿರುವ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಯಿಂದ ಚರ ಮತ್ತು ಸ್ಥಿರ ಸ್ವತ್ತುಗಳ ಅರ್ಜನೆ ಮತ್ತು ವರ್ಗಾವಣೆ) ನಿಯಮಗಳು 1996 ರಂತೆ ತಾಲ್ಲೂಕು ಪಂಚಾಯತಿಯ ಪೂರ್ವಾನುಮೋದನೆ ಅಗತ್ಯವಿರುತ್ತದೆ. ಆದರೆ ತಾಲ್ಲೂಕು ಪಂಚಾಯತಿ, ದೇವನಹಳ್ಳಿ ಕಛೇರಿಯ ಸಭೆಯಲ್ಲಿ ಈ ವಿಷಯದ ಕುರಿತು ಯಾವುದೇ ಪ್ರಸ್ತಾವನೆಯನ್ನು ಮಂಡನೇ ಮಾಡಿರುವುದಿಲ್ಲವೆಂದು ಹಾಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಯನಿರ್ವಾಹಕ ಅಧಿಕಾರಿಗಳು ಹಿಂಬರಹ ನೀಡಿರುತ್ತಾರೆ. ಹಾಗೂ ಈ ಬಗ್ಗೆ ಸಭಾ ನಡವಳಿಯ ದೃಢೀಕರಣವನ್ನು ನೀಡಿರುತ್ತಾರೆ. ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಶ್ರೀ ಎನ್.ಆರ್. ಉಮೇಶ, ಇವರು ಸ್ವಇಚ್ಛೆಯಿಂದ ಏಕಪಕ್ಷೀಯವಾಗಿ ಜ್ಞಾಪನವನ್ನು ನೀಡುವ ಮೂಲಕ ನಿಯಮಗಳನ್ನು ಉಲ್ಲಂಘಿಸಿರುತ್ತಾರೆ.

6. ಶ್ರೀ ಎನ್.ಆರ್.ಉಮೇಶ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ದೇವನಹಳ್ಳಿ ಇವರು ತಾಲ್ಲೂಕು ಮುಖ್ಯಸ್ಥರಾಗಿದ್ದು, ಗ್ರಾಮ ಪಂಚಾಯತಿಯಿಂದ ಸಲ್ಲಿಸಿದ ವರದಿಯನ್ನು ತಾಲ್ಲೂಕು ಪಂಚಾಯತಿಯ ಸಭೆಯ ಮುಂದೆ ಮಂಡನೆ ಮಾಡದೆ ಮತ್ತು ತಾಲ್ಲೂಕು ಪಂಚಾಯತಿಯಲ್ಲಿ ಈ ವಿಷಯದ ಬಗ್ಗೆ ಕಡತವನ್ನು ನಿರ್ವಹಿಸದೆ ಏಕಪಕ್ಷೀಯವಾಗಿ ಸ್ವಇಚ್ಛೆಯಿಂದ ಜ್ಞಾಪನ ಪತ್ರವನ್ನು ಹೊರಡಿಸಿ, ಭ್ರಷ್ಟಾಚಾರ ವ್ಯವಹಾರದಲ್ಲಿ ಶಾಮೀಲಾಗುವ ಮೂಲಕ ತಮ್ಮ

ಅಧಿಕಾರವನ್ನು ದುರುಪಯೋಗ ಪಡಿಸಿಕೊಂಡಿರುವುದು ತನಿಖೆಯಿಂದ ದೃಢಪಟ್ಟಿರುತ್ತದೆ. ಹಾಗೂ ಇದು ಒಂದು ಗಂಭೀರವಾದ ಪ್ರಕರಣವಾಗಿರುತ್ತದೆ.

ದೇವನಹಳ್ಳಿ ತಾಲ್ಲೂಕು ಪಂಚಾಯತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ಶ್ರೀ ಉಮೇಶ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಉತ್ತರ ಇವರು ವಿಶ್ವನಾಥಪುರ ಗ್ರಾಮ ಪಂಚಾಯತಿಯ ಗ್ರಾಮಸ್ಥರು ಸಲ್ಲಿಸಿರುವ ದೂರಿನಂತೆ ಗ್ರಾಮ ಪಂಚಾಯತಿಯಲ್ಲಿ ಕಾನೂನು ನಿಯಮಗಳನ್ನು ಮತ್ತು ಷರತ್ತುಗಳನ್ನು ಪಾಲಿಸದೆ ಕಾನೂನು ಬಾಹಿರವಾಗಿ ಅಧಿಕೃತ ಪೂರ್ವಾನುಮತಿ ಇಲ್ಲದೆ ಹಾಗೂ ಸಾರ್ವಜನಿಕ ತಿಳುವಳಿಕೆ ಮತ್ತು ಆಕ್ಷೇಪಣೆಗಳಿಗೆ ಅವಕಾಶ ನೀಡದೇ ಬೋಗ್ಯ ಕರಾರು ಪತ್ರವನ್ನು ಮಾಡುವ ಮೂಲಕ ಶ್ರೀ ಎನ್.ರಾಮಮೂರ್ತಿ ಅಧ್ಯಕ್ಷರು ಹಾಗೂ ಶ್ರೀ ಎನ್.ಕೃಷ್ಣಪ್ಪ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ವಿಶ್ವನಾಥಪುರ ಗ್ರಾಮ ಪಂಚಾಯತಿ ಇವರುಗಳು ಅಧಿಕಾರ ದುರುಪಯೋಗ ಪಡಿಸಿಕೊಂಡು ಕರ್ತವ್ಯ ಭ್ರಷ್ಟತೆ ಮಾಡಿ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುತ್ತಾರೆ.

ಸದರಿ ಅವ್ಯವಹಾರದಲ್ಲಿ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಎನ್.ಆರ್.ಉಮೇಶ ಇವರು ತಾಲ್ಲೂಕು ಮುಖ್ಯಸ್ಥರಾಗಿದ್ದು, ಗ್ರಾಮ ಪಂಚಾಯತಿ ವತಿಯಿಂದ ಸಲ್ಲಿಸಿದ್ದ ವರದಿಯನ್ನು ತಾಲ್ಲೂಕು ಪಂಚಾಯತಿ ಸಭೆಯ ಮುಂದೆ ಮಂಡನೆ ಮಾಡದೆ ಮತ್ತು ತಾಲ್ಲೂಕು ಪಂಚಾಯತಿಯಲ್ಲಿ ಈ ವಿಷಯದ ಬಗ್ಗೆ ಕಡತವನ್ನು ನಿರ್ವಹಿಸದೆ ಏಕಪಕ್ಷೀಯವಾಗಿ ಸ್ವಇಚ್ಛೆಯಿಂದ ವಿಶ್ವನಾಥಪುರ ಗ್ರಾಮ ಪಂಚಾಯತಿಯ ಬೊಮ್ಮನವಾರ ಗ್ರಾಮದ ಸ.ನಂ.64 ಹಾಗೂ ಬಂಡರಾಮನಹಳ್ಳಿ ಗ್ರಾಮದ ಸ.ನಂ.12 ರಲ್ಲಿನ ಸಿ.ಎ.1 ಹಾಗೂ ಸಿ.ಎ.2 ನಿವೇಶನಗಳನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993ರ ಪ್ರಕರಣ 309ರ ಅಡಿಯಲ್ಲಿ ರಚಿಸಿರುವ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯಿತಿಯಿಂದ ಚರ ಮತ್ತು ಸ್ಥಿರ ಸ್ವತ್ತುಗಳ ಅರ್ಜನೆ ಮತ್ತು ವರ್ಗಾವಣೆ) ನಿಯಮಗಳು 1996 ರಂತೆ ತಾಲ್ಲೂಕು ಪಂಚಾಯತಿಯ ಪೂರ್ವಾನುಮೋದನೆ ಇಲ್ಲದೆ ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿಟ್ಟ ಸರ್ಕಾರಿ ಜಮೀನನ್ನು **FORTIUS LAND DEVELOPERS L.L.P** ಸಂಸ್ಥೆಯವರಿಗೆ ಕ್ಲಬ್ ಹೌಸ್ ನಿರ್ಮಿಸಲು ಸಿ.ಎ. ಸೈಟನ 4414 ಚ.ಮೀ. ಪ್ರದೇಶವನ್ನು ಗುತ್ತಿಗೆ ಆಧಾರದ ಮೇಲೆ ಖಾಸಗಿ ಸಂಸ್ಥೆಗೆ ನೀಡಿರುವುದು ಕರ್ನಾಟಕ ನಾಗರೀಕ ಸೇವೆ (ನಡತೆ) ನಿಯಮಗಳು 1966 ನಿಯಮ 3(1) (i) (ii) (iii) ರನ್ವಯ ದುರ್ನಡತೆ ಎಸಗಿದ್ದು ಶಿಸ್ತು ಕ್ರಮಕ್ಕೆ ಬಾಧ್ಯರಾಗಿದ್ದು, ಇವರು ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು, ತೀವ್ರತರವಾದ ಕರ್ತವ್ಯ ನಿರ್ಲಕ್ಷತೆ ಮತ್ತು ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಸಾಬೀತಾಗಿರುತ್ತದೆ.

ಆದುದರಿಂದ, ಶ್ರೀ ಎನ್.ಆರ್.ಉಮೇಶ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ದೇವನಹಳ್ಳಿ ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್, ಬೆಂಗಳೂರು ಉತ್ತರ ಇವರನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 10(1)(ಡಿ) ರನ್ವಯ ಸೇವೆಯಿಂದ ಅಮಾನತ್ತುಗೊಳಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 76 ವಿಸೇಬಿ 2017 ಬೆಂಗಳೂರು, ದಿನಾಂಕ: 17.04.2017</u>

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ಶ್ರೀ ಎನ್.ಆರ್.ಉಮೇಶ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ದೇವನಹಳ್ಳಿ ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬೆಂಗಳೂರು ಉತ್ತರ ಇವರು ಸರ್ಕಾರಿ ಅಧಿಕಾರಿಯಾಗಿದ್ದು, ಕರ್ತವ್ಯ ನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ಗ್ರಾಮ ಪಂಚಾಯತಿಯ ಆಸ್ತಿಯನ್ನು ಅಕ್ರಮ ಪರಭಾರೆ ಪ್ರಕರಣದಲ್ಲಿ ಕಾನೂನುಬಾಹಿರವಾಗಿ ತಾಲ್ಲೂಕು ಪಂಚಾಯತಿಯ ಅನುಮೋದನೆಯನ್ನು ಪಡೆಯದೆ ಪರಭಾರೆ ಮಾಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 10(1)(ಡಿ)ರ ಅನುಸಾರ ಅವರ ವಿರುದ್ಧದ ಆರೋಪಗಳ ಕುರಿತಂತೆ ತನಿಖೆ/ಇಲಾಖಾ ವಿಚಾರಣೆಯನ್ನು ಬಾಕಿ ಇಟ್ಟು ತಕ್ಷಣದಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಪಡಿಸಲಾಗಿದೆ.

ಅಮಾನತ್ತುಗೊಂಡಿರುವ ಅಧಿಕಾರಿಯು ಅಮಾನತ್ತಿನ ಅವಧಿಯಲ್ಲಿ ನಿಯಮಾನುಸಾರ ಜೀವನ ಆಧಾರ ಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.

ಸದರಿಯವರು ಅಮಾನತ್ತಿನ ಅವಧಿಯಲ್ಲಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡಕೂಡದೆಂದು ತಿಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

17/04/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು-ಬಿ & ಸಿ) (ಪ್ರಭಾರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು, (ಎ & ಇ) ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ
3. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಇವರ ಮುಖಾಂತರ)

ಪ್ರತಿಗಳು ಮಾಹಿತಿಗಾಗಿ :

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತ ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್) ಜಂಟಿ ಕಾರ್ಯದರ್ಶಿ (ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಶಾಖೆಗೆ.
3. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.